## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಜಿ.ಎಫ್.ಹೊನ್ನತಿ, ಹಿಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬೆಟ್ಟಗೆರೆ ಗ್ರಾಮ ಪಂಚಾಯಿತಿ, ಮೂಡಿಗೆರೆ ತಾಲ್ಲೂಕು, (ಹಾಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಚೆನ್ನಿಗಾ ಗ್ರಾಮ ಪಂಚಾಯತಿ ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ), ಇವರು ಸಾರ್ವಜನಿಕ ನೌಕರರಾಗಿ ದುರ್ವತನೆ ಎಸಗಿರುವ ಬಗ್ಗೆ.

**ಓದಲಾಗಿದೆ:**

1) ಉಪ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಎಂವೈಎಸ್-254/2011/ಡಿಆರ್ಇ-1, ದಿನಾಂಕ: 25-06-2011.
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/217/ಗ್ರಾಪಂಕಾ/2011, ದಿ: 29-07-2011
3) ಅಪರ ನಿಬಂಧಕರು, ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರಸಂಖ್ಯೆ:ಲೋಕ್/ಎಆರ್ಇ-6/ಇಎನ್‌ಕ್ಯೂ-165/2011, ದಿನಾಂಕ: 01-06-2015.
4) ಶ್ರೀ ಜಿ.ಎಫ್.ಹೊನ್ನತಿ, ರವರಿಗೆ ಸರ್ಕಾರದಿಂದ ಎರಡನೇ ಕಾರಣ ಕೇಳುವ ನೋಟೀಸ್. ನೀಡಲಾದ ದಿನಾಂಕ: 01-07-2015
5) ಶ್ರೀ ಶ್ರೀ ಜಿ.ಎಫ್.ಹೊನ್ನತಿ, ದಿನಾಂಕ: 12-08-2015 ರಂದು ಎರಡನೇ ಕಾರಣ ಕೇಳುವ ನೋಟೀಸ್‌ಗೆ ಸಲ್ಲಿಸಿರುವ ವಿವರಣೆ.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಉಪ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಇವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಶ್ರೀ ಜಿ.ಎಫ್.ಹೊನ್ನತಿ, ಹಿಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬೆಟ್ಟಗೆರೆ ಗ್ರಾಮ ಪಂಚಾಯಿತಿ, ಮೂಡಿಗೆರೆ ತಾಲ್ಲೂಕು, (ಹಾಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಚೆನ್ನಿಗಾ ಗ್ರಾಮ ಪಂಚಾಯತಿ ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ), ಇವರು ಬೆಟ್ಟಗೆರೆ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯದರ್ಶಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ದೂರುದಾರರಾದ ಶ್ರೀ ವಿಜಯ್ ಪಿಂಟೋ ಬಿನ್ ಶ್ರೀ ಹೆರಿಯನ್ ಪಿಂಟೋ, ಬೆಟ್ಟಗೆರೆ ಗ್ರಾಮ, ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ, ಇವರಿಗೆ ಗ್ರಾಮೀಣ ಉದ್ಯೋಗ ಖಾತ್ರಿ ಅಡಿಯಲ್ಲಿ ರೂ.15,000/- ಮೊತ್ತಕ್ಕೆ ಬಿಲ್ ತಯಾರಿಸಿ ಚೆಕ್ ನೀಡುವಾಗ ಅವರಿಂದ ರೂ.1500/- ಲಂಚದ ಹಣಕ್ಕೆ ಒತ್ತಾಯಿಸಿ ಅದನ್ನು ದಿನಾಂಕ:10-03-2010 ರಂದು ದೂರುದಾರರಿಂದ ಪಡೆದು ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಸದರಿಯವರು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966ರ ನಿಯಮ 3(1) (i) ರಿಂದ (iii) ಅನ್ವಯ ದುರ್ನಡತೆ ಎಸಗಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ಜಿ.ಎಫ್.ಹೊನ್ನತಿ, ಇವರ ವಿರುದ್ಧದ ಅಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳ ನಿಯಮ 14(ಎ) ಅಡಿಯಲ್ಲಿ ವಿಚಾರಣೆಯನ್ನು ನಡೆಸಲು ಮಾನ್ಯ ಉಪ ಲೋಕಾಯುಕ್ತರಿಗೆ, ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿನ ವಿಚಾರಣಾಧಿಕಾರಿಯವರು, ದಿನಾಂಕ: 27-05-2015 ರಂದು ಮಾನ್ಯ ಉಪಲೋಕಾಯುಕ್ತರಿಗೆ ವಿಚಾರಣಾ ವರದಿಯನ್ನು ಸಲ್ಲಿಸಿದ್ದು ಸದರಿ ವರದಿಯ ಅನುಸಾರ ಶ್ರೀ ಜಿ. ಎಫ್.ಹೊನ್ನತಿ, ರವರ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ನಿರ್ಣಯಿಸಿರುತ್ತಾರೆ. ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) (2) (ಡಿ) ಅನುಸಾರ ದಿನಾಂಕ:01-06-2015 ರಂದು ಮಾಡಿರುವ ಶಿಫಾರಸ್ಸಿನಲ್ಲಿ ಶ್ರೀ ಜಿ.ಎಫ್.ಹೊನ್ನತಿ, ರವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(viii) ಅಡಿಯಲ್ಲಿ ನಿರ್ದಿಷ್ಟಪಡಿಸಿದಂತೆ ಸದರಿಯವರನ್ನು ಸೇವೆಯಿಂದ ವಜಾಗೊಳಿಸುವ ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿನ ನಿಯಮಾನುಸಾರ ಆರೋಪಿತ ನೌಕರರಿಗೆ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೊಟೀಸನ್ನು ದಿನಾಂಕ:01-07-2015 ರಂದು ಜಾರಿ ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀ ಜಿ.ಎಫ್.ಹೊನ್ನತಿ, ಇವರು ತಮ್ಮ ವಿರುದ್ಧದ ಇಲಾಖಾ ವಿಚಾರಣೆ ದೋಷ ಪೂರಿತವಾಗಿದೆ ಹಾಗೂ ತಮ್ಮನ್ನು ಸುಳ್ಳು ಪ್ರಕರಣದಲ್ಲಿ ಸಿಲುಕಿಸಲಾಗಿದೆ. ಈ ಪ್ರಕರಣದಲ್ಲಿ ತಮ್ಮ ವಿರುದ್ಧದ ಆರೋಪ ಸುಳ್ಳು ದೂರಿನಿಂದ ಕೂಡಿದೆ ಹಾಗೂ ವಿಚಾರಣಾಧಿಕಾರಿಯವರು ಈ ಪ್ರಕರಣದಲ್ಲಿ ಸೂಕ್ತವಾದ ವಿಚಾರಣೆ ನಡೆಸಿರುವುದಿಲ್ಲ ಎಂದು ಹೇಳಿಕೆಯನ್ನು ನೀಡಿರುತ್ತಾರೆ. ಸರ್ಕಾರವು ಪ್ರಕರಣವನ್ನು ಪರಿಶೀಲಿಸಿದ್ದು, ಶ್ರೀ ಜಿ.ಎಫ್.ಹೊನ್ನತಿ, ರವರ ಹೇಳಿಕೆಗಳ ಸತ್ಯಾ ಸತ್ಯತೆಗಳನ್ನು ಪರಮಾರ್ಶಿಸಿ ಅದರಂತೆ ಈ ಕೆಳಕಂಡ ಆದೇಶ,

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/217/ಗ್ರಾಪಂಕಾ/2011**
**ಬೆಂಗಳೂರು, ದಿನಾಂಕ:29-03-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೇಲ್ಕಂಡ ವಿವರಣೆಯನ್ನು ಮಾನ್ಯ ಲೋಕಾಯುಕ್ತ ತನಿಖಾ ವರದಿಯಲ್ಲಿ ಆಪಾದಿತರು ನೀಡಿರುವ ಸಮರ್ಥನೆಯನ್ನು ಒಪ್ಪಿರುವುದಿಲ್ಲ, ಆಪಾದಿತರನ್ನು "ಸೇವೆಯಿಂದ ವಜಾಗೊಳಿಸುವ" ದಂಡನೆ ವಿಧಿಸಲು ಶಿಪಾರಸ್ಸು ಮಾಡಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(viii) ರಂತೆ ಶ್ರೀ ಜಿ.ಎಫ್.ಹೊನ್ನತಿ, ಹಿಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬೆಟ್ಟಗೆರೆ ಗ್ರಾಮ ಪಂಚಾಯಿತಿ, ಮೂಡಿಗೆರೆ ತಾಲ್ಲೂಕು, (ಹಾಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಚೆನ್ನಿಗಾ ಗ್ರಾಮ ಪಂಚಾಯತಿ ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ), ಇವರನ್ನು ಸೇವೆಯಿಂದ ವಜಾಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಅಪರ ನಿಬಂಧಕರು, ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
6) ಶ್ರೀ ಜಿ.ಎಫ್.ಹೊನ್ನತಿ, ಹಿಂದಿನ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಬೆಟ್ಟಗೆರೆ ಗ್ರಾಮ ಪಂಚಾಯಿತಿ, ಮೂಡಿಗೆರೆ ತಾಲ್ಲೂಕು, (ಹಾಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ, ಚೆನ್ನಿಗಾ ಗ್ರಾಮ ಪಂಚಾಯತಿ ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ).
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.